KA / BG - GPO/ 2515 /WPP-47/ 2009 - 2011

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ಪತ್ರಿಕೆ

| ಭಾಗ – IV-A | ಬೆಂಗಳೂರು, ಮಂಗಳವಾರ, ಮಾರ್ಚ್ ೨೯, ೨೦೧೧ (ಚೈತ್ರ ೮, ಶಕ ವರ್ಷ ೧೯೩೩) | ನಂ. ೩೨೦ |
|---|---|---|

## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ: ಸಿಆಸುಇ 50 ಸೇವನೆ 2010, ಬೆಂಗಳೂರು, ದಿನಾಂಕ: 28.03.2011**

ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರಿಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು, 2006, ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 02.02.2011ರ ಅಧಿಸೂಚನೆ ಸಂಖ್ಯೆ: ಸಿಆಸುಇ 50 ಸೇವನೆ 2010 ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಇದರ ಪ್ರಕಟನೆಯ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಭಾದಿತರಾಗುವ ಸಂಭವವಿರುವ ಎಲ್ಲ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 03.03.2011ರ ಕರ್ನಾಟಕ ರಾಜ್ಯಪತ್ರದ ಭಾಗ–IV ಎ ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 3ನೆ ಪ್ರಕರಣದ (2)ನೆ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದಿಂದ;

ಸದರಿ ರಾಜ್ಯಪತ್ರವನ್ನು 03.03.2011 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದಿಂದ;

ಮತ್ತು, ಸದರಿ ಕರಡಿನ ಬಗ್ಗೆ ಯಾವುದೇ ಆಕ್ಷೇಪಣೆ/ಸಲಹೆಗಳು ರಾಜ್ಯ ಸರ್ಕಾರದಲ್ಲಿ ಸ್ವೀಕೃತವಾಗಿರುವುದಿಲ್ಲ;

ಆದ್ದರಿಂದ, ಈಗ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ, 14)ರ 8ನೆ ಪ್ರಕರಣದೊಂದಿಗೆ ಓದಿಕೊಂಡ 3ನೆ ಪ್ರಕರಣದ (1)ನೆ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ;–

## ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ:–** (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) (ತಿದ್ದುಪಡಿ) ನಿಯಮಗಳು, 2011 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 6ಕ್ಕೆ ತಿದ್ದುಪಡಿ:–** ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು, 2006ರ ನಿಯಮ 6ರ ಖಂಡ ಬಿ, ಉಪ–ಖಂಡ (i) ರಲ್ಲಿನ, ಅಂಶ (ಎ)ಯಲ್ಲಿನ ಶೀರ್ಷಿಕೆ "ಪತ್ರಿಕೆ–1" ಮತ್ತು ಅದಕ್ಕೆ ಸಂಬಂಧಪಟ್ಟ ನಮೂದುಗಳನ್ನು ಕೆಳಕಂಡಂತೆ ಪ್ರತಿಸ್ಥಾಪಿಸಲಾಗಿದೆ. ಅಂದರೆ:–

Scanned by CamScanner

"**ಪತ್ರಿಕೆ–1** – ನಿಗದಿಪಡಿಸಿದ ಅರ್ಹತಾ ಪರೀಕ್ಷೆಯಲ್ಲಿ ಉತ್ತೀರ್ಣನಾದ ಒಬ್ಬ ವ್ಯಕ್ತಿಯಿಂದ ನಿರೀಕ್ಷಿಸಬಹುದಾದ ಸಾಮಾನ್ಯ ಜ್ಞಾನಕ್ಕೆ ಸಂಬಂಧಪಟ್ಟ ವಿಷಯಗಳಾದ ಪ್ರಚಲಿತ ವಿದ್ಯಮಾನಗಳು, ಸಾಮಾನ್ಯ ವಿಜ್ಞಾನಗಳು, ಭಾರತದ ಇತಿಹಾಸ, ಭಾರತದ ಭೂಗೋಳ, ಸಮಾಜ ವಿಜ್ಞಾನ, ಪ್ರತಿದಿನ ಗಮನಿಸುವ ವಿಷಯಗಳು, ಪ್ರಾಯೋಗಿಕ ಜ್ಞಾನ ಮತ್ತು ಸಾಮಾನ್ಯ ಬೌದ್ಧಿಕ ಸಾಮರ್ಥ್ಯಗಳನ್ನು ಒಳಗೊಂಡಿರುವ ಸಾಮಾನ್ಯ ಪತ್ರಿಕೆ."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ದೇವರಾಜು**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು–1)

Scanned by CamScanner